# ಕರ್ನಾಟಕ ವಿಧಾನ ಪರಿಷತ್ತು

ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ : 563 (745)
ಸದಸ್ಯರ ಹೆಸರು : ಶ್ರೀ ಮರಿತಿಬ್ಬೇಗೌಡ (ಶಿಕ್ಷಕರ ಕ್ಷೇತ್ರ)
ಉತ್ತರಿಸುವ ದಿನಾಂಕ : 11–12–2023
ಉತ್ತರಿಸುವ ಸಚಿವರು : ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಸಚಿವರು

| ಕ್ರಮ ಸಂಖ್ಯೆ | ಪ್ರಶ್ನೆ | ಉತ್ತರ |
|---|---|---|
| ಅ) | ಕಳೆದ ಸಾಲಿನ ಸರ್ಕಾರಿ ಪದವಿ ಪೂರ್ವ ಕಾಲೇಜುಗಳ ಉಪನ್ಯಾಸಕರ ಖಾಲಿ ಇರುವ ಹುದ್ದೆಗಳಿಗೆ ಕೌನ್ಸಿಲಿಂಗ್ ವರ್ಗಾವಣೆ ಮಾಡುವಾಗ ವಿದ್ಯಾರ್ಥಿಗಳ ಸಂಖ್ಯೆ 40ಕ್ಕಿಂತ ಕಡಿಮೆ ಇರುವ ಕಡೆ ವರ್ಗಾವಣೆ ಮಾಡದೆ ಇರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; | ಹೌದು, |
| ಆ) | ಈ ರೀತಿ ಮಾಡಲು ವರ್ಗಾವಣೆ ನಿಯಮದಲ್ಲಿ ಅವಕಾಶವಿತ್ತೇ; ವರ್ಗಾವಣೆ ಮಾಡಲು ಕಾರಣಗಳೇನು; | ಕರ್ನಾಟಕ ರಾಜ್ಯ ನಾಗರೀಕ ಸೇವೆಗಳು (ಪ್ರಾಂಶುಪಾಲರು/ಉಪನ್ಯಾಸಕರ ವರ್ಗಾವಣೆ ನಿಯಂತ್ರಣ) ನಿಯಮಗಳು 2022ರನ್ವಯ ಉಪನ್ಯಾಸಕರಿಗೆ ವಿದ್ಯಾರ್ಥಿಗಳ ಸಂಖ್ಯಾನುಸಾರ ವಾರಕ್ಕೆ ಪ್ರಾಯೋಗಿಕ ವಿಷಯಕ್ಕೆ 24 ಮತ್ತು ಇತರೆ ವಿಷಯಗಳಿಗೆ 20 ಗಂಟೆಗಳ ಕಾರ್ಯಭಾರವನ್ನು ನಿಗದಿಪಡಿಸಲಾಗಿದೆ.<br><br>ಸರ್ಕಾರದ ಅಧಿಸೂಚನೆ ಸಂಖ್ಯೆ:ಇಡಿ 136 ಟಿಪಿಯು 1999 ದಿನಾಂಕ:09.10.2006ರ ಕರ್ನಾಟಕ ಶಿಕ್ಷಣ ಕಾಯ್ದೆಯ ನಿಯಮ 11ರನ್ವಯ ಉಪನ್ಯಾಸಕರ ಕಾರ್ಯಭಾರವನ್ನು ಸರಿದೂಗಿಸಲು ಪದವಿ ಪೂರ್ವ ತರಗತಿಯಲ್ಲಿ ಕನಿಷ್ಠ 40 ವಿದ್ಯಾರ್ಥಿಗಳ ಸಂಖ್ಯೆಯನ್ನು ಹೊಂದಿರಬೇಕಾಗಿರುತ್ತದೆ. ಆದ್ದರಿಂದ, ವರ್ಗಾವಣೆಯಲ್ಲಿ 40ಕ್ಕಿಂತ ಹೆಚ್ಚು ವಿದ್ಯಾರ್ಥಿಗಳ ಸಂಖ್ಯೆಯನ್ನು ಹೊಂದಿರುವ ಕಾಲೇಜುಗಳ ಖಾಲಿ ಹುದ್ದೆಗಳನ್ನು ಪರಿಗಣಿಸಲಾಗಿದೆ. |
| ಇ) | ಅನುದಾನಿತ ಪದವಿ ಪೂರ್ವ ಕಾಲೇಜುಗಳಲ್ಲಿ ವಿಷಯವಾರು ವಿದ್ಯಾರ್ಥಿಗಳ ಸಂಖ್ಯೆ 40ಕ್ಕಿಂತ ಕಡಿಮೆ ಇದ್ದಲ್ಲಿ, ಅಲ್ಲಿನ ಉಪನ್ಯಾಸಕರನ್ನು ಬೇರೊಂದು ಅನುದಾನಿತ ಶಿಕ್ಷಣ ಸಂಸ್ಥೆಗೆ ನಿಯೋಜನೆ ಮಾಡಲಾಗುತ್ತಿದೆಯೇ; | ಹೌದು.<br><br>ಖಾಸಗಿ ಅನುದಾನಿತ ಪದವಿ ಪೂರ್ವ ಕಾಲೇಜಿನಲ್ಲಿ ಕಾರ್ಯಭಾರದ ಕೊರತೆ ಕಂಡುಬಂದ್ದಲ್ಲಿ ಸರ್ಕಾರದ ಪತ್ರ ಸಂಖ್ಯೆ:ಇಡಿ 144 ಟಿಪಿಯು 2016 ದಿನಾಂಕ:06–02–2020ರನ್ವಯ ಅದೇ ಜಿಲ್ಲೆಯಲ್ಲಿನ ಮತ್ತೊಂದು ಖಾಸಗಿ ಅನುದಾನಿತ ಪದವಿ ಪೂರ್ವ ಕಾಲೇಜಿಗೆ ಕಾರ್ಯಭಾರವನ್ನು ಹೊಂದಾಣಿಕೆ ಮಾಡಿಕೊಂಡು ವಿದ್ಯಾರ್ಥಿಗಳ ಶೈಕ್ಷಣಿಕ ಪ್ರಗತಿಗೆ ತೊಂದರೆಯಾಗದಂತೆ |

| | | |
|---|---|---|
| ಈ) | ಇದರಿಂದ ಸದರಿ ಕಾಲೇಜುಗಳ ವಿದ್ಯಾರ್ಥಿಗಳಿಗೆ ತೊಂದರೆಯಾಗುತ್ತಿರುವುದು ಸಕಾರದ ಗಮನಕ್ಕೆ ಬಂದಿದೆಯೇ; | ಆಯಾ ಜಿಲ್ಲಾ ಉಪನಿರ್ದೇಶಕರ ಹಂತದಲ್ಲಿ ಪ್ರತಿ ಶೈಕ್ಷಣಿಕ ವರ್ಷವೂ ಕ್ರಮವಹಿಸಲಾಗುತ್ತಿದೆ.<br>ಸದರಿ ಕಾಲೇಜುಗಳ ವಿದ್ಯಾರ್ಥಿಗಳಿಗೆ ತೊಂದರೆಯಾಗುತ್ತಿರುವುದು ಕಂಡುಬಂದಿರುವುದಿಲ್ಲ. |
| ಉ) | ಅನುದಾನಿತ ಪದವಿ ಪೂರ್ವ ಕಾಲೇಜುಗಳಲ್ಲಿ ವಿದ್ಯಾರ್ಥಿಗಳ ಕೊರತೆ ಇರುವ ವಿಷಯದಲ್ಲಿನ ಉಪನ್ಯಾಸಕರನ್ನು ಸರ್ಕಾರಿ ಕಾಲೇಜುಗಳಿಗೆ ನಿಯೋಜಿಸಲು ಸರ್ಕಾರಕ್ಕಿರುವ ತೊಂದರೆಗಳೇನು? | ಸರ್ಕಾರದ ಆದೇಶ ಸಂಖ್ಯೆ:ಇಪಿ 10 ಟಿಪಿಯು 2022 ದಿನಾಂಕ:30-09-2023ರಲ್ಲಿ ಕಾರ್ಯಭಾರದ ಕೊರತೆ ಇರವ ಅನುದಾನಿತ ಪದವಿ ಪೂರ್ವ ಕಾಲೇಜುಗಳಲ್ಲಿನ ಉಪನ್ಯಾಸಕರನ್ನು ಸರ್ಕಾರಿ ಕಾಲೇಜಿಗೆ ನಿಯೋಜಿಸಿ ಕಾರ್ಯಭಾರ ಸರಿದೂಗಿಸಲು ಅವಕಾಶವಿರುವುದಿಲ್ಲವೆಂದು ಆದೇಶಿಸಲಾಗಿದೆ.. |

**ಸಂಖ್ಯೆ: ಇಪಿ 220 ಡಿಜಿಡಬ್ಲ್ಯೂ 2023**

(ಎಸ್.ಮಧು ಬಂಗಾರಪ್ಪ)
ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಸಚಿವರು.